**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು**

**ವಿರಾಜಪೇಟೆ**

**ಓ.ಎಸ್. ಸಂಖ್ಯೆ:37/2025**

**ಪಿಡಬ್ಲ್ಯೂ- 1**

**ದಿನಾಂಕ : 28-03-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು : ಪ್ರತಿವಾದಿ ಪರ ಶ್ರೀ. ಎನ್ ಎಸ್ ಪಿ ವಕೀಲರಿಂದ :-**

1. ವಾದಿ ನನ್ನ ಸಂಬಂಧಿಕರಾಗಿರುತ್ತಾರೆ (Uncle). ನಾನು ದಾವಾ ಆಸ್ತಿಯನ್ನು ನೋಡಿರುತ್ತೇನೆ. ದಾವಾ ಆಸ್ತಿ ವಾಸಕ್ಕೆ ಯೋಗ್ಯವಲ್ಲ ಎಂದು ನಾನು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಪ್ರತಿವಾದಿಯ ತಂದೆ ದಾವಾ ಆಸ್ತಿಯಲ್ಲಿ ಪ್ರತಿವಾದಿಗಿಂತ ಮುಂಚಿತವಾಗಿ ವಾಸವಿದ್ದರು ಎಂದರೆ ನನಗೆ ಗೊತ್ತಿಲ್ಲ. ಪ್ರತಿವಾದಿಯ ಕುಟುಂಬ ದಾವಾ ಆಸ್ತಿಯಲ್ಲಿ ವಾಸವಿದ್ದಾರೆ ಎಂದರೆ ಸರಿ. ಪ್ರತಿವಾದಿಯ ತಂದೆ ಸುಮಾರು 50 ರಿಂದ 60 ವರ್ಷಗಳಿಂದ ಅವರು ಹಾಗೂ ಕುಟುಂಬಸ್ಥರ ಜೊತೆಯಲ್ಲಿ ದಾವಾ ಆಸ್ತಿಯಲ್ಲಿ ವಾಸವಿದ್ದಾರೆ ಎಂದರೆ ಸರಿಯಲ್ಲ.

2. ಪ್ರತಿವಾದಿಯು ವಾದಿಯ ತಂದೆಯ ಕಾಲದಲ್ಲಿ ದಾವಾ ಆಸ್ತಿಯಲ್ಲಿ ಕಾರ್ಮಿಕರೆಂದು ವಾಸ ಮಾಡಲು ಬಂದಿರುತ್ತಾರೆ ಎಂದರೆ ಸರಿ. ಪ್ರತಿವಾದಿ ಇತ್ತೀಚೆಗೆ ದಾವಾ ಆಸ್ತಿಗೆ ಬಂದಿರುತ್ತಾರೆ. ನಿಪಿ2 ಕಾನೂನು ತಿಳುವಳಿಕೆ ಪತ್ರ ಪ್ರತಿವಾದಿಗೆ ತಲುಪಿರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿ ವಾದಿಗೆ ಅವಶ್ಯಕತೆ ಇರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿ ವಿರುದ್ಧ ಗ್ರಾಮ ಪಂಚಾಯಿತಿ ಸುಳ್ಳು ತಕಾರಾರು ಸಲ್ಲಿಸಿ, ಪ್ರತಿವಾದಿಗೆ ಗ್ರಾಮ ಪಂಚಾಯಿತಿಯಿಂದ ಯಾವುದೇ ಸೌಲಭ್ಯವನ್ನು ಉಪಯೋಗಿಸಿಕೊಳ್ಳದ ಹಾಗೆ ವಾಡಿರುತ್ತೇವೆ ಎಂದರೆ ಸರಿಯಲ್ಲ. ಪ್ರತಿವಾದಿಗೆ ದಾವಾ ಆಸ್ತಿಗೆ ಹೋಗಲು ಇರುವ ರಸ್ತೆಯನ್ನು ಹೋಗದೆ ಇರುವ ಹಾಗೆ ತಡೆದು, ತೊಂದರೆ ಮಾಡುತ್ತಿದ್ದೇವೆ ಎಂದರೆ

ಸರಿಯಲ್ಲ. ಪ್ರತಿವಾದಿ ವಿರುದ್ಧ ಪೊಲೀಸ್ ಠಾಣೆಗೆ ಸುಳ್ಳು ದೂರನ್ನು ನೀಡಲಾಗಿದೆ ಎಂದರೆ ಸರಿಯಲ್ಲ. ವಾದಿ ಹಾಗೂ ಪ್ರತಿವಾದಿಯ ಮಧ್ಯೆ ಯಾವುದೇ ಮಾಲೀಕ ಹಾಗೂ ಬಾಡಿಗೆದಾರ ಎಂದು ಸಂಬಂಧ ಇಲ್ಲ ಎಂದರೆ ಸರಿಯಲ್ಲ. ಪ್ರತಿವಾದಿ ವಾದಿಯ ಬಾಡಿಗೆದಾರನಲ್ಲ ಎಂದರೆ ಸರಿಯಲ್ಲ. ಬಾಡಿಗೆ ಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿಲ್ಲ ಎಂದರೆ ಸಾಕ್ಷಿಯು ಮೌಖಿಕವಾಗಿ ಬಾಡಿಗೆ ಒಪ್ಪಂದ ವಾದಿ ಹಾಗೂ ಪ್ರತಿವಾದಿ ಮಧ್ಯೆ ಆಗಿರುತ್ತದೆ ಎನ್ನುತ್ತಾರೆ. ಆದ್ದರಿಂದ ವಾದಿ ಕೇಳಿರುವ ಪರಿಹಾರಕ್ಕೆ ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ.

ಪಾಟೀ ಸವಾಲು : ಮುಕ್ತಾಯ.

ಮರು ವಿಚಾರಣೆ : ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ. ಹೇ. ಕೇ. ಸ. ಇದೆ.

ಸಹಿ/-

(ಪ್ರದೀಪ ಪೋತದಾರ)

ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.

ವಿರಾಜಪೇಟೆ.